# ಶುಭವಾರ್ತೆ





ಎಲಿಜಬೇತಳು ಆರು ತಿಂಗಳ ಗರ್ಭಿಣಿಯಾಗಿದ್ದಾಗ, ದೇವರು ತನ್ನ ದೂತನಾದ ಗಬ್ರಿಯೇಲನನ್ನು ಗಲಿಲೇಯ ಪ್ರಾಂತ್ಯದ ನಜರೇತ್ ಎಂಬ ಊರಿನಲ್ಲಿ ವಾಸಿಸುತ್ತಿದ್ದ ಒಬ್ಬ ಕನ್ಯೆಯ ಬಳಿಗೆ ಕಳುಹಿಸಿದನು. ಆಕೆಗೆ ದಾವೀದನ ಮನೆತನದ ಯೋಸೇಫನೊಂದಿಗೆ ನಿಶ್ಚಿತಾರ್ಥವಾಗಿತ್ತು. ಆಕೆಯ ಹೆಸರು ಮರಿಯಳು. ದೇವದೂತನು ಆಕೆಯ ಬಳಿಗೆ ಬಂದು, "ದೇವರಾಶೀರ್ವಾದ ಹೊಂದಿದವಳೇ, ನಿನಗೆ ಶುಭವಾಗಲಿ! ಪ್ರಭುವು ನಿನ್ನೊಡನೆ ಇದ್ದಾನೆ" ಎಂದು ಹೇಳಿದನು.

ದೇವದೂತನ ಮಾತನ್ನು ಕೇಳಿ ಬಹು ಗಲಿಬಿಲಿಗೊಂಡ ಮರಿಯಳು, "ಇದರ ಅರ್ಥವೇನಿರಬಹುದು?" ಎಂದು ಆಶ್ಚರ್ಯಪಟ್ಟಳು.

ದೇವದೂತನು ಆಕೆಗೆ, "ಮರಿಯಳೇ, ಭಯಪಡಬೇಡ. ದೇವರು ನಿನ್ನನ್ನು ಬಹಳವಾಗಿ ಆಶೀರ್ವದಿಸಿದ್ದಾನೆ. ಕೇಳು! ನೀನು ಗರ್ಭಿಣಿಯಾಗಿ ಒಂದು ಗಂಡುಮಗುವನ್ನು ಹೆರುವೆ. ಆತನಿಗೆ, 'ಯೇಸು' ಎಂದು ಹೆಸರಿಡಬೇಕು. ಆತನು ಮಹಾಪುರುಷನಾಗುವನು. ಜನರು ಆತನನ್ನು ಮಹೋನ್ನತನ (ದೇವರ) ಮಗನೆಂದು ಕರೆಯುವರು. ಪ್ರಭುವಾದ ದೇವರು ಆತನಿಗೆ ಆತನ ಪೂರ್ವಿಕನಾದ ದಾವೀದನ ಅಧಿಕಾರವನ್ನು ಕೊಡುವನು. ಯೇಸುವು ಯಾಕೋಬನ ಜನರನ್ನು ಸದಾಕಾಲ ಆಳುವನು. ಆತನ ರಾಜ್ಯ ಎಂದಿಗೂ ಅಂತ್ಯವಾಗುವುದಿಲ್ಲ" ಎಂದು ಹೇಳಿದನು.

ಮರಿಯಳು, "ನಾನು ಪ್ರಭುವಿನ ದಾಸಿ. ನೀನು ಹೇಳಿದಂತೆಯೇ ನನಗಾಗಲಿ!" ಅಂದಳು. ಬಳಿಕ ದೇವದೂತನು ಹೊರಟುಹೋದನು.

*ಲೂಕ 1:26-33 & 38*



ಆದ್ದರಿಂದ ಯೋಸೇಫನು ಗಲಿಲಾಯದಲ್ಲಿನ ನಜರೇತ್ ಎಂಬ ಊರಿನಿಂದ ಹೊರಟು ಜುದೇಯದಲ್ಲಿನ ಬೆತ್ಲೆಹೇಮ್ ಎಂಬ ಊರಿಗೆ ಹೋದನು. ಯೋಸೇಫನು ದಾವೀದನ ಮನೆತನದವನಾಗಿದ್ದುದರಿಂದ ದಾವೀದನ ಊರಾದ ಬೆತ್ಲೆಹೇಮಿಗೆ ಹೋದನು. ಅವನು ತನ್ನೊಂದಿಗೆ ಮರಿಯಳನ್ನೂ ಕರೆದುಕೊಂಡು ಹೋದನು. ಆಕೆಗೆ ಅವನೊಂದಿಗೆ ನಿಶ್ಚಿತಾರ್ಥವಾಗಿತ್ತು. (ಮರಿಯಳು ಆಗ ಗರ್ಭಿಣಿಯಾಗಿದ್ದಳು.) ಅವರು ಬೆತ್ಲೆಹೇಮಿನಲ್ಲಿದ್ದಾಗ ಮರಿಯಳಿಗೆ ಹೆರಿಗೆಕಾಲ ಬಂತು. ಆಕೆ ತನ್ನ ಚೊಚ್ಚಲಮಗುವನ್ನು (ಯೇಸು) ಹೆತ್ತಳು. ಅವರಿಗೆ ಇಳಿದುಕೊಳ್ಳಲು ಛತ್ರದಲ್ಲಿ ಸ್ಥಳ ದೊರೆಯಲಿಲ್ಲ. ಆದುದರಿಂದ ಮರಿಯಳು ಮಗುವನ್ನು ಬಟ್ಟೆಯಿಂದ ಸುತ್ತಿ ದನದ ಕೊಟ್ಟಿಗೆಯಲ್ಲಿ ಮೇವು ಹಾಕುತ್ತಿದ್ದ ತೊಟ್ಟಿಯಲ್ಲಿ ಮಲಗಿಸಿದಳು.

*ಲೂಕ 2:4-7*



ಆ ರಾತ್ರಿ, ಕೆಲವು ಕುರುಬರು ಹೊಲಗಳ ಸಮೀಪದಲ್ಲಿ ತಮ್ಮ ಕುರಿಗಳನ್ನು ಕಾಯುತ್ತಿದ್ದರು. ಪ್ರಭುವಿನ ದೂತನೊಬ್ಬನು ಕುರುಬರ ಮುಂದೆ ನಿಂತನು. ಅವರ ಸುತ್ತಲೂ ಪ್ರಭುವಿನ ಪ್ರಭೆಯು ಪ್ರಕಾಶಿಸಿತು. ಕುರುಬರು ಬಹಳವಾಗಿ ಹೆದರಿದರು. ದೇವದೂತನು ಅವರಿಗೆ, “ಹೆದರಬೇಡಿರಿ, ಜನರೆಲ್ಲರಿಗೆ ಮಹಾಸಂತೋಷವನ್ನು ಉಂಟುಮಾಡುವ ಶುಭಸಂದೇಶವನ್ನು ನಿಮಗೆ ತಿಳಿಸುತ್ತೇನೆ. ಅದೇನೆಂದರೆ: ಈ ದಿನ ನಿಮಗೋಸ್ಕರ ದಾವೀದನ ಊರಿನಲ್ಲಿ ರಕ್ಷಕನು ಜನಿಸಿದ್ದಾನೆ. ಆತನೇ ಪ್ರಭುವಾದ ಕ್ರಿಸ್ತನು. ಬಟ್ಟೆಯಲ್ಲಿ ಸುತ್ತಿರುವ ಒಂದು ಮಗು ದನದ ಕೊಟ್ಟಿಗೆಯಲ್ಲಿ ಮಲಗಿರುವುದನ್ನು ನೀವು ಕಾಣುವಿರಿ. ನೀವು ಆತನನ್ನು ಗೊತ್ತುಪಡಿಸಿಕೊಳ್ಳಲು ಅದೇ ಗುರುತಾಗಿದೆ” ಎಂದು ಹೇಳಿದನು.


ತಕ್ಷಣವೇ ಪರಲೋಕದಿಂದ ದೇವದೂತರು ಬಹುದೊಡ್ಡ ಗುಂಪಾಗಿ ಬಂದು ಮೊದಲನೆಯ ದೇವದೂತನೊಡನೆ ಸೇರಿಕೊಂಡರು. ಅವರೆಲ್ಲರೂ,

“ಮೇಲಣಲೋಕಗಳಲ್ಲಿ ದೇವರಿಗೆ ಮಹಿಮೆ;
ಭೂಲೋಕದಲ್ಲಿ ದೇವರೊಲಿದವರಿಗೆ ಸಮಾಧಾನ”

ಎಂದು ಹೇಳುತ್ತಾ ದೇವರನ್ನು ಸ್ತುತಿಸಿದರು. *ಲೂಕ 2:8-14*



ಬಾಲಕ ಯೇಸು ಬೆಳೆದು ಬಲಗೊಂಡು ಸಂಪೂರ್ಣ ಜ್ಞಾನಿಯಾದನು. ದೇವರ ಆಶೀರ್ವಾದವು ಆತನೊಡನೆ ಇತ್ತು. *ಲೂಕ 2:40*




ಅಂತೆಯೇ ಸ್ನಾನಿಕ ಯೋಹಾನನು ಬಂದು, ಅಡವಿಯಲ್ಲಿ ಜನರಿಗೆ, "ನೀವು ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಂಡು ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ. ಆಗ ನಿಮಗೆ ಪಾಪಕ್ಷಮೆ ಆಗುವುದು" ಎಂದು ಉಪದೇಶಿಸುತ್ತಿದ್ದನು ಮತ್ತು ದೀಕ್ಷಾಸ್ನಾನ ಕೊಡುತ್ತಾ ಇದ್ದನು. ಜುದೇಯ ಮತ್ತು ಜೆರುಸಲೇಮಿನ ಜನರೆಲ್ಲರೂ ಯೋಹಾನನ ಬಳಿಗೆ ಬಂದು ತಮ್ಮ ಪಾಪಗಳನ್ನು ಅರಿಕೆಮಾಡಿಕೊಂಡರು. ಆಗ ಯೋಹಾನನು ಅವರಿಗೆ ಜೋರ್ಡನ್ ನದಿಯಲ್ಲಿ ದೀಕ್ಷಾಸ್ನಾನ ಕೊಟ್ಟನು.

ಯೋಹಾನನು ಒಂಟೆಯ ತುಪ್ಪಟದಿಂದ ಮಾಡಿದ ಹೊದಿಕೆಯನ್ನು ಹೊದ್ದುಕೊಂಡು ಸೊಂಟಕ್ಕೆ ತೊಗಲಿನ ನಡುಪಟ್ಟಿಯನ್ನು ಕಟ್ಟಿಕೊಳ್ಳುತ್ತಿದ್ದನು. ಅವನು ಮಿಡತೆಗಳನ್ನು ಮತ್ತು ಕಾಡುಜೇನನ್ನು ತಿನ್ನುತ್ತಿದ್ದನು.

ಯೋಹಾನನು ಜನರಿಗೆ, "ನನ್ನ ತರುವಾಯ ಬರುವಾತನು ನನಗಿಂತಲೂ ಶಕ್ತನಾಗಿದ್ದಾನೆ. ನಾನು ಮೊಣಕಾಲೂರಿ, ಆತನ ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ಯೋಗ್ಯನಲ್ಲ. ನಾನು ನಿಮಗೆ ನೀರಿನಲ್ಲಿ ದೀಕ್ಷಾಸ್ನಾನ ಮಾಡಿಸುತ್ತೇನೆ, ಆದರೆ ಆತನು ನಿಮಗೆ ಪವಿತ್ರಾತ್ಮನಲ್ಲಿ ದೀಕ್ಷಾಸ್ನಾನ ಮಾಡಿಸುತ್ತಾನೆ" ಎಂದು ಬೋಧಿಸಿದನು.

ಆ ದಿನಗಳಲ್ಲಿ ಯೇಸು ಗಲಿಲಾಯದ ನಜರೇತಿನಿಂದ ಯೋಹಾನನಿದ್ದ ಸ್ಥಳಕ್ಕೆ ಬಂದನು. ಯೋಹಾನನು ಯೇಸುವಿಗೆ ಜೋರ್ಡನ್ ನದಿಯಲ್ಲಿ ದೀಕ್ಷಾಸ್ನಾನ ಮಾಡಿಸಿದನು. ಯೇಸು ನೀರಿನಿಂದ ಮೇಲಕ್ಕೆ ಬರುತ್ತಿದ್ದಾಗ, ಆಕಾಶವು ತೆರೆಯಂತೆ ಹರಿದುಹೋಯಿತು; ಮತ್ತು ಪವಿತ್ರಾತ್ಮನು ತನ್ನ ಮೇಲೆ ಪಾರಿವಾಳದ ರೂಪದಲ್ಲಿ ಇಳಿದುಬರುತ್ತಿರುವುದನ್ನು ಕಂಡನು. ಆಗ ಪರಲೋಕದಿಂದ ಧ್ವನಿಯೊಂದು ಹೊರಟು, "ನೀನೇ ನನ್ನ ಪ್ರಿಯ ಮಗನು. ನಾನು ನಿನ್ನನ್ನು ಮೆಚ್ಚಿಕೊಂಡಿದ್ದೇನೆ" ಎಂದು ಹೇಳಿತು.

*ಮಾರ್ಕ 1:4-11*



ನಂತರ ಯೇಸು ಒಂದು ಬೆಟ್ಟದ ಮೇಲಕ್ಕೆ ಹೋದನು. ಯೇಸು ಕೆಲವು ಜನರಿಗೆ ತನ್ನೊಂದಿಗೆ ಬರಲು ಹೇಳಿದನು. ಯೇಸು ಅಪೇಕ್ಷಿಸಿದ ಜನರು ಇವರೇ. ಈ ಜನರು ಯೇಸುವಿನೊಂದಿಗೆ ಮೇಲಕ್ಕೆ ಹೋದರು. ಆತನು ಅವರಲ್ಲಿ ಹನ್ನೆರಡು ಮಂದಿಯನ್ನು ತನ್ನ ಅಪೊಸ್ತಲರನ್ನಾಗಿ ಆರಿಸಿಕೊಂಡನು. ಈ ಹನ್ನೆರಡು ಮಂದಿ ತನ್ನೊಂದಿಗಿರಬೇಕೆಂಬುದು ಮತ್ತು ಉಪದೇಶ ಮಾಡುವುದಕ್ಕಾಗಿ ಅವರನ್ನು ಬೇರೆ ಸ್ಥಳಗಳಿಗೆ ಕಳುಹಿಸಬೇಕೆಂಬುದು ಅಲ್ಲದೆ ದೆವ್ವಗಳಿಂದ ಪೀಡಿತರಾಗಿರುವ ಜನರನ್ನು ಅವುಗಳಿಂದ ಬಿಡಿಸುವುದಕ್ಕೆ ಅವರಿಗೆ ಅಧಿಕಾರ ಕೊಡಬೇಕೆಂಬುದು ಆತನ ಅಪೇಕ್ಷೆಯಾಗಿತ್ತು. *ಮಾರ್ಕ 3:13-15*




ನಿಕೊದೇಮ ಎಂಬ ಒಬ್ಬ ಮನುಷ್ಯನಿದ್ದನು. ನಿಕೊದೇಮನು ಫರಿಸಾಯರಲ್ಲಿ ಒಬ್ಬನಾಗಿದ್ದನು. ಅವನು ಒಬ್ಬ ಮುಖ್ಯ ಯೆಹೂದ್ಯ ನಾಯಕನಾಗಿದ್ದನು. ಒಂದು ರಾತ್ರಿ ನಿಕೊದೇಮನು ಯೇಸುವಿನ ಬಳಿಗೆ ಬಂದನು. ನಿಕೊದೇಮನು, "ಗುರುವೇ, ನೀನು ದೇವರಿಂದ ಕಳುಹಿಸಲ್ಪಟ್ಟ ಉಪದೇಶಕನೆಂದು ನಮಗೆ ಗೊತ್ತಿದೆ. ನೀನು ಮಾಡುವ ಈ ಸೂಚಕಕಾರ್ಯಗಳನ್ನು ದೇವರ ಸಹಾಯದಿಂದಲ್ಲದೆ ಯಾರೂ ಮಾಡಲಾರರು" ಎಂದು ಹೇಳಿದನು.

ಯೇಸು "ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ಒಬ್ಬನು ಹೊಸದಾಗಿ ಹುಟ್ಟಲೇಬೇಕು. ಒಬ್ಬನು ಹೊಸದಾಗಿ ಹುಟ್ಟಿಲ್ಲದಿದ್ದರೆ ಅವನು ದೇವರ ರಾಜ್ಯವನ್ನು ಕಾಣಲಾರನು" ಎಂದು ಉತ್ತರಿಸಿದನು.

ನಿಕೊದೇಮನು, "ಮನುಷ್ಯನು ಮುದುಕನಾದ ಮೇಲೆ ಹುಟ್ಟುವುದು ಹೇಗೆ? ಒಬ್ಬನು ತನ್ನ ತಾಯಿಯ ಗರ್ಭದೊಳಗೆ ಮತ್ತೆ ಪ್ರವೇಶಿಸಲು ಸಾಧ್ಯವೇ?" ಎಂದು ಕೇಳಿದನು.

ಅದಕ್ಕೆ ಯೇಸು, "ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ಒಬ್ಬನು ನೀರಿನಿಂದಲೂ ಆತ್ಮನಿಂದಲೂ ಹುಟ್ಟಲೇಬೇಕು. ಇಲ್ಲವಾದರೆ ಅವನು ದೇವರ ರಾಜ್ಯವನ್ನು ಪ್ರವೇಶಿಸಲಾರನು. ದೇಹವು ಮಾನುಷ ತಂದೆತಾಯಿಗಳಿಂದ ಹುಟ್ಟಿದ್ದು. ಆದರೆ ಆತ್ಮಿಕ ಜೀವನವು ಆತ್ಮನಿಂದ ಹುಟ್ಟಿದ್ದು" ಎಂದು ಹೇಳಿದನು.

*ಯೋಹಾನ 3:1-6*



ಮರುದಿನ ಯೇಸು
ನಾಯಿನ್ ಎಂಬ ಊರಿಗೆ ಹೋದನು.
ಯೇಸುವಿನೊಡನೆ ಆತನ ಶಿಷ್ಯರೂ
ಹೋಗುತ್ತಿದ್ದರು. ಅವರೊಡನೆ ಅನೇಕ
ಜನರು ದೊಡ್ಡ ಸಮೂಹವಾಗಿ ಹೋಗುತ್ತಿದ್ದರು. ಯೇಸು
ಊರಬಾಗಿಲಿನ ಬಳಿಗೆ ಬಂದಾಗ, ಸತ್ತುಹೋಗಿದ್ದ ಒಬ್ಬನನ್ನು ಸಮಾಧಿ
ಮಾಡುವುದಕ್ಕಾಗಿ ಹೊತ್ತುಕೊಂಡು ಹೋಗುತ್ತಿದ್ದ ಜನರ ಗುಂಪನ್ನು
ಕಂಡನು. ವಿಧವೆಯೊಬ್ಬಳ ಒಬ್ಬನೇ ಮಗನು ಸತ್ತುಹೋಗಿದ್ದನು. ಅವನ
ಶವವನ್ನು ಹೊತ್ತುಕೊಂಡು ಹೋಗುತ್ತಿದ್ದಾಗ ಊರಿನ ಅನೇಕ ಜನರು
ಆಕೆಯೊಡನೆ ಇದ್ದರು. ಪ್ರಭುವು (ಯೇಸು) ಆಕೆಯನ್ನು ಕಂಡು ತನ್ನ
ಹೃದಯದಲ್ಲಿ ಮರುಕಗೊಂಡು, "ಅಳಬೇಡ" ಎಂದು ಹೇಳಿ ಶವದ ಪೆಟ್ಟಿಗೆಯ ಬಳಿಹೋಗಿ ಅದನ್ನು ಮುಟ್ಟಿದನು. ಆ ಪೆಟ್ಟಿಗೆಯನ್ನು ಹೊತ್ತುಕೊಂಡು ಹೋಗುವವರು ನಿಂತುಕೊಂಡರು. ಯೇಸು ಸತ್ತುಹೋಗಿದ್ದವನಿಗೆ, "ಯೌವನಸ್ಥನೇ, ಎದ್ದೇಳು! ಎಂದು ನಾನು ನಿನಗೆ ಹೇಳುತ್ತೇನೆ" ಎಂದನು. ಆಗ ಅವನು ಎದ್ದು ಕುಳಿತುಕೊಂಡು ಮಾತಾಡತೊಡಗಿದನು. ಯೇಸು ಅವನನ್ನು ಅವನ ತಾಯಿಗೆ ಒಪ್ಪಿಸಿದನು.

ಜನರೆಲ್ಲರೂ ವಿಸ್ಮಯಪಟ್ಟರು. ಅವರು ದೇವರನ್ನು ಸ್ತುತಿಸುತ್ತಾ, "ಒಬ್ಬ ಮಹಾಪ್ರವಾದಿ ನಮ್ಮ ಬಳಿಗೆ ಬಂದಿದ್ದಾನೆ! ದೇವರು ತನ್ನ ಜನರಿಗೆ ಸಹಾಯ ಮಾಡಲು ಬಂದಿದ್ದಾನೆ" ಎಂದು ಹೇಳಿದರು.

*ಲೂಕ 7:11-16*



ಯೇಸು ಕಣ್ಣೆತ್ತಿ ನೋಡಿದಾಗ, ತನ್ನ ಬಳಿಗೆ ಬರುತ್ತಿದ್ದ ಜನಸಮೂಹವನ್ನು ಕಂಡು ಫಿಲಿಪ್ಪನಿಗೆ, "ಈ ಜನರಿಗೆಲ್ಲಾ ಸಾಕಾಗುವಷ್ಟು ರೊಟ್ಟಿಯನ್ನು ನಾವು ಎಲ್ಲಿ ಕೊಂಡುಕೊಳ್ಳೋಣ?" ಎಂದು ಕೇಳಿದನು. (ಫಿಲಿಪ್ಪನನ್ನು ಪರೀಕ್ಷಿಸುವುದಕ್ಕಾಗಿ ಆತನು ಈ ಪ್ರಶ್ನೆಯನ್ನು ಕೇಳಿದನು. ತಾನು ಮಾಡಲಿದ್ದ ಕಾರ್ಯ ಯೇಸುವಿಗೆ ಮೊದಲೇ ತಿಳಿದಿತ್ತು.) ಫಿಲಿಪ್ಪನು, "ಇಲ್ಲಿರುವ ಪ್ರತಿಯೊಬ್ಬರಿಗೆ ರೊಟ್ಟಿಯ ಒಂದು ತುಂಡನ್ನು ಕೊಡಬೇಕಾದರೆ, ಇನ್ನೂರು ದಿನಾರಿ ನಾಣ್ಯಗಳಾದರೂ ಬೇಕು" ಎಂದು ಉತ್ತರಕೊಟ್ಟನು. ಅಂದ್ರೆಯನೆಂಬ ಮತ್ತೊಬ್ಬ ಶಿಷ್ಯನು ಅಲ್ಲಿದ್ದನು. ಅಂದ್ರೆಯನು ಸೀಮೋನ್ ಪೇತ್ರನ ಸಹೋದರ. ಅಂದ್ರೆಯನು, "ಇಲ್ಲಿರುವ ಒಬ್ಬ ಹುಡುಗನ ಬಳಿ ಜವೆಗೋಧಿಯ ಐದು ರೊಟ್ಟಿಗಳಿವೆ ಮತ್ತು ಎರಡು ಚಿಕ್ಕ ಮೀನುಗಳಿವೆ. ಆದರೆ ಅವು ಈ ಜನಸಮೂಹಕ್ಕೆ ಸಾಕಾಗುವುದಿಲ್ಲ" ಎಂದು ಹೇಳಿದನು.

ಯೇಸು, "ಜನರಿಗೆ ಕುಳಿತುಕೊಳ್ಳಲು ಹೇಳಿರಿ" ಎಂದು ತಿಳಿಸಿದನು. ಆ ಸ್ಥಳದಲ್ಲಿ ಹುಲ್ಲು ಹುಲುಸಾಗಿ ಬೆಳೆದಿತ್ತು. ಅಲ್ಲಿ ಕುಳಿತುಕೊಂಡವರಲ್ಲಿ ಸುಮಾರು ಐದುಸಾವಿರ ಮಂದಿ ಗಂಡಸರಿದ್ದರು. ಬಳಿಕ ಯೇಸು ಆ ರೊಟ್ಟಿಗಳನ್ನು ತೆಗೆದುಕೊಂಡು ಅವುಗಳಿಗಾಗಿ ದೇವರಿಗೆ ಸ್ತೋತ್ರಸಲ್ಲಿಸಿ, ಕುಳಿತುಕೊಂಡಿದ್ದ ಜನರಿಗೆ ಕೊಟ್ಟನು. ಆತನು ಮೀನುಗಳನ್ನು ಕೊಡುವಾಗಲೂ ಅದೇರೀತಿ ಮಾಡಿದನು. ಎಲ್ಲರೂ ತಮಗೆ ಬೇಕಾದಷ್ಟು ತಿಂದರು. ಅವರೆಲ್ಲರೂ ಊಟ ಮಾಡಿ ತೃಪ್ತರಾದ ಮೇಲೆ ಯೇಸು ತನ್ನ ಶಿಷ್ಯರಿಗೆ, "ಉಳಿದುಹೋದ ರೊಟ್ಟಿ ಮತ್ತು ಮೀನುಗಳ ತುಂಡುಗಳನ್ನು ಒಟ್ಟುಗೂಡಿಸಿರಿ. ಯಾವುದನ್ನೂ ಹಾಳುಮಾಡಬೇಡಿ" ಎಂದು ಹೇಳಿದನು. ಆದ್ದರಿಂದ ಶಿಷ್ಯರು ಉಳಿದುಹೋಗಿದ್ದ ತುಂಡುಗಳನ್ನು ಒಟ್ಟುಗೂಡಿಸಿದರು. ಜನರು ತಿನ್ನಲು ಆರಂಭಿಸಿದಾಗ ಕೇವಲ ಐದು ಜವೆಗೋದಿಯ ರೊಟ್ಟಿಗಳಿದ್ದವು. ಆದರೆ ಶಿಷ್ಯರು ಉಳಿದುಹೋದ ಆಹಾರದ ತುಂಡುಗಳನ್ನು ಒಟ್ಟುಗೂಡಿಸಿದಾಗ ಹನ್ನೆರಡು ದೊಡ್ಡ ಬುಟ್ಟಿಗಳು ತುಂಬಿಹೋದವು.

ಯೇಸು ಮಾಡಿದ ಈ ಸೂಚಕಕಾರ್ಯವನ್ನು ಕಂಡ ಜನರು, "ಈ ಲೋಕಕ್ಕೆ ಬರಲಿರುವ ಪ್ರವಾದಿ ನಿಜವಾಗಿಯೂ ಈತನೇ ಇರಬೇಕು" ಎಂದು ಹೇಳತೊಡಗಿದರು.

*ಯೋಹಾನ 6:5-14*



ಆ ಸಾಯಂಕಾಲ ಯೇಸುವಿನ ಶಿಷ್ಯರು ಸರೋವರಕ್ಕೆ (ಗಲಿಲಾಯ) ಹೋದರು. ಆಗಲೇ ಕತ್ತಲಾಗಿತ್ತು. ಯೇಸು ಅವರ ಬಳಿಗೆ ಇನ್ನೂ ಬಂದಿರಲಿಲ್ಲ. ಆದ್ದರಿಂದ ಶಿಷ್ಯರು ದೋಣಿಯನ್ನು ಹತ್ತಿ ಸರೋವರದ ಆಚೆಯ ಕಡೆಯಿದ್ದ ಕಪೆರ್ನೌಮಿಗೆ ಹೊರಟರು. ಗಾಳಿಯು ಬಹು ರಭಸವಾಗಿ ಬೀಸುತ್ತಿತ್ತು. ಸರೋವರದ ಅಲೆಗಳು ದೊಡ್ಡದಾಗುತ್ತಿದ್ದವು. ಅವರು ಹುಟ್ಟುಹಾಕುತ್ತಾ ಸುಮಾರು ಮೂರು ಅಥವಾ ನಾಲ್ಕು ಮೈಲಿಗಳವರೆಗೆ ದೋಣಿಯನ್ನು ನಡೆಸಿದ ನಂತರ ಯೇಸುವನ್ನು ಕಂಡರು. ಆತನು ನೀರಿನ ಮೇಲೆ ನಡೆಯುತ್ತಾ ದೋಣಿಯ ಸಮೀಪಕ್ಕೆ ಬರುತ್ತಿರುವುದನ್ನು ಕಂಡು ಅವರಿಗೆ ಭಯವಾಯಿತು. ಯೇಸು ಅವರಿಗೆ, "ಹೆದರಬೇಡಿರಿ, ನಾನೇ" ಎಂದು ಹೇಳಿದನು. ಆಗ ಅವರು ಯೇಸುವನ್ನು ದೋಣಿಯೊಳಗೆ ಬರಮಾಡಿಕೊಳ್ಳಬೇಕೆಂದಿದ್ದರು. ಅಷ್ಟರಲ್ಲೇ, ಅವರು ಹೋಗಬೇಕೆಂದಿದ್ದ ಸ್ಥಳದ ದಡಕ್ಕೆ ದೋಣಿಯು ತಲುಪಿತು. *ಯೋಹಾನ 6:16-21*




ಜನರು, ತಮ್ಮ ಚಿಕ್ಕಮಕ್ಕಳನ್ನು ಮುಟ್ಟಿ ಆಶೀರ್ವದಿಸಲೆಂದು ಅವರನ್ನು ಯೇಸುವಿನ ಬಳಿಗೆ ತಂದರು. ಆದರೆ ಮಕ್ಕಳನ್ನು ಯೇಸುವಿನ ಬಳಿಗೆ ತರಕೂಡದೆಂದು ಶಿಷ್ಯರು ಜನರನ್ನು ಗದರಿಸಿದರು. ಇದನ್ನು ಕಂಡ ಯೇಸು ಕೋಪಗೊಂಡು ಅವರಿಗೆ, "ಚಿಕ್ಕಮಕ್ಕಳನ್ನು ನನ್ನ ಬಳಿಗೆ ಬರಗೊಡಿಸಿರಿ. ಅವರನ್ನು ತಡೆಯಬೇಡಿ, ಏಕೆಂದರೆ ದೇವರ ರಾಜ್ಯವು ಇಂಥವರದೇ. ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ದೇವರ ರಾಜ್ಯವನ್ನು ಮಕ್ಕಳ ಮನೋಭಾವದಿಂದ ಸ್ವೀಕರಿಸದಿದ್ದರೆ ನೀವು ಅದರೊಳಗೆ ಸೇರುವುದೇ ಇಲ್ಲ" ಎಂದು ಹೇಳಿದನು. ನಂತರ ಯೇಸು ಮಕ್ಕಳನ್ನು ತನ್ನ ಕೈಗಳಿಂದ ಅಪ್ಪಿಕೊಂಡು ಅವರ ಮೇಲೆ ತನ್ನ ಕೈಗಳನ್ನಿಟ್ಟು ಆಶೀರ್ವದಿಸಿದನು.

*ಮಾರ್ಕ 10:13-16*



“ನಾನೇ ಒಳ್ಳೆಯ ಕುರುಬ. ಒಳ್ಳೆಯ ಕುರುಬನು ಕುರಿಗಳಿಗಾಗಿ ತನ್ನ ಪ್ರಾಣವನ್ನು ಕೊಡುತ್ತಾನೆ. *ಯೋಹಾನ 10:11*

“ನನ್ನ ಕುರಿಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ನಾನು ಅವುಗಳನ್ನು ಬಲ್ಲೆನು ಮತ್ತು ಅವುಗಳು ನನ್ನನ್ನು ಹಿಂಬಾಲಿಸುತ್ತವೆ. ನನ್ನ ಕುರಿಗಳಿಗೆ ನಾನು ನಿತ್ಯಜೀವವನ್ನು ಕೊಡುತ್ತೇನೆ. ಅವು ಎಂದಿಗೂ ಸಾಯುವುದಿಲ್ಲ, ಮತ್ತು ಅವುಗಳನ್ನು ಯಾರೂ ನನ್ನಿಂದ ಕಸಿದುಕೊಳ್ಳಲಾರರು.” *ಯೋಹಾನ 10:27-28*



ಆಗ ಮಹಾಯಾಜಕರು ಮತ್ತು ಫರಿಸಾಯರು ಯೆಹೂದ್ಯರ ಆಲೋಚನಾಸಭೆಯನ್ನು ಕರೆದು, "ನಾವು ಏನು ಮಾಡಬೇಕು? ಈ ಮನುಷ್ಯನು (ಯೇಸು) ಅನೇಕ ಸೂಚಕಕಾರ್ಯಗಳನ್ನು ಮಾಡುತ್ತಿದ್ದಾನೆ. ಈ ಕಾರ್ಯಗಳನ್ನು ಮಾಡಲು ನಾವು ಅವನಿಗೆ ಅವಕಾಶಕೊಟ್ಟರೆ ಜನರೆಲ್ಲರೂ ಇವನಲ್ಲಿ ನಂಬಿಕೆ ಇಡುವರು. ಆಗ ರೋಮ್ ರಾಜ್ಯದವರು ಬಂದು ನಮ್ಮ ದೇವಾಲಯವನ್ನೂ ನಮ್ಮ ದೇಶವನ್ನೂ ವಶಪಡಿಸಿಕೊಳ್ಳುವರು" ಅಂದರು.

ಅವರಲ್ಲಿ ಕಾಯಫನೆಂಬ ಒಬ್ಬನಿದ್ದನು. ಅವನು ಆ ವರ್ಷ ಮಹಾಯಾಜಕನಾಗಿದ್ದನು. ಅವನು, "ನಿಮಗೆ ಏನೂ ಗೊತ್ತಿಲ್ಲ! ಇಡೀ ಜನಾಂಗವು ನಾಶವಾಗುವುದಕ್ಕಿಂತ ಒಬ್ಬನು ಅವರಿಗೋಸ್ಕರವಾಗಿ ಸಾಯುವುದು ಉತ್ತಮ. ಆದರೆ ನೀವು ಇದನ್ನು ಅರ್ಥಮಾಡಿಕೊಳ್ಳುತ್ತಿಲ್ಲ" ಎಂದು ಹೇಳಿದನು.

ಇದು ಕಾಯಫನ ಸ್ವಂತ ಆಲೋಚನೆಯಾಗಿರಲಿಲ್ಲ. ಅವನು ಆ ವರ್ಷ ಮಹಾಯಾಜಕನಾಗಿದ್ದನು. ಆದ್ದರಿಂದ ಯೆಹೂದ್ಯರಿಗೋಸ್ಕರವಾಗಿ ಯೇಸು ಸಾಯುತ್ತಾನೆಂದು ಅವನು ನಿಜವಾಗಿಯೂ ಪ್ರವಾದಿಸಿದನು. ಹೌದು, ಯೆಹೂದ್ಯರಿಗಾಗಿಯೂ ಲೋಕದಲ್ಲೆಲ್ಲಾ ಚದರಿಹೋಗಿರುವ ದೇವರ ಮಕ್ಕಳನ್ನೆಲ್ಲ ಒಂದುಗೂಡಿಸುವುದಕ್ಕಾಗಿಯೂ ಆತನು ಸಾಯಲಿದ್ದನು.

ಅಂದಿನಿಂದ ಯೆಹೂದ್ಯನಾಯಕರು ಯೇಸುವನ್ನು ಕೊಲ್ಲಲು ಸಂಚು ಮಾಡಲಾರಂಭಿಸಿದರು.


*ಯೋಹಾನ 11:47-53*



ಸಾಯಂಕಾಲದಲ್ಲಿ ಯೇಸು ತನ್ನ ಹನ್ನೆರಡು ಮಂದಿ ಶಿಷ್ಯರೊಂದಿಗೆ ಊಟಕ್ಕೆ ಕುಳಿತಿದ್ದನು. ಅವರೆಲ್ಲರೂ ಊಟ ಮಾಡುತ್ತಿದ್ದಾಗ ಯೇಸು, “ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಇಲ್ಲಿರುವ ಹನ್ನೆರಡು ಮಂದಿಯಲ್ಲಿ ಒಬ್ಬನು ನನ್ನನ್ನು ವೈರಿಗಳಿಗೆ ಒಪ್ಪಿಸುತ್ತಾನೆ” ಎಂದು ಹೇಳಿದನು.

ಶಿಷ್ಯರು ಇದನ್ನು ಕೇಳಿ ಬಹಳ ದುಃಖಪಟ್ಟರು. ಪ್ರತಿಯೊಬ್ಬ ಶಿಷ್ಯನು ಯೇಸುವಿಗೆ, “ಪ್ರಭುವೇ, ನಿಜವಾಗಿಯೂ ನಾನಲ್ಲ!” ಎಂದು ಹೇಳಿದರು.


ಯೇಸು, “ಬಟ್ಟಲಲ್ಲಿ ನನ್ನ ಸಂಗಡ ತನ್ನ ಕೈಗಳನ್ನು ಅದ್ದುವವನೇ ನನಗೆ ವಿರೋಧವಾಗಿದ್ದಾನೆ” ಎಂದು ಹೇಳಿದನು. ಮತ್ತಾಯ *26:20-23*




ದುಷ್ಕರ್ಮಿಗಳಲ್ಲೊಬ್ಬನು ಯೇಸುವನ್ನು ದೂಷಿಸಿ, “ನೀನು ಕ್ರಿಸ್ತನಲ್ಲವೊ? ಹಾಗಾದರೆ ನಿನ್ನನ್ನು ರಕ್ಷಿಸಿಕೊ! ನಮ್ಮನ್ನೂ ರಕ್ಷಿಸು!” ಅಂದನು.


ಆದರೆ ಇನ್ನೊಬ್ಬ ದುಷ್ಕರ್ಮಿಯು ಅವನನ್ನು ಗದರಿಸಿ, “ನೀನು ದೇವರಿಗೆ ಹೆದರಬೇಕು! ನಾವೆಲ್ಲರೂ ಬೇಗನೆ ಸಾಯುವೆವು! ನೀನೂ ನಾನೂ ಅಪರಾಧಿಗಳಾಗಿದ್ದೇವೆ. ನಾವು ತಪ್ಪು ಮಾಡಿದ್ದರಿಂದ ಶಿಕ್ಷಿಸಲ್ಪಡಬೇಕು. ಆದರೆ ಈ ಮನುಷ್ಯನು (ಯೇಸು) ಯಾವ ತಪ್ಪನ್ನೂ ಮಾಡಲಿಲ್ಲ!” ಎಂದು ಹೇಳಿದನು. ಬಳಿಕ ಆ ದುಷ್ಕರ್ಮಿಯು ಆತನಿಗೆ, “ಯೇಸುವೇ ನೀನು ನಿನ್ನ ರಾಜ್ಯವನ್ನು ಸ್ಥಾಪಿಸುವಾಗ ನನ್ನನ್ನು ನೆನಸಿಕೊ!” ಎಂದು ಹೇಳಿದನು.

ಆಗ ಯೇಸು ಅವನಿಗೆ, “ಕೇಳು! ನಾನು ಸತ್ಯವನ್ನೇ ಹೇಳುತ್ತೇನೆ. ಈ ದಿನವೇ ನೀನು ನನ್ನ ಸಂಗಡ ಪರದೈಸಿನಲ್ಲಿರುವಿ” ಎಂದು ಹೇಳಿದನು. *ಲೂಕ 23:39-43*





ಇಷ್ಟರಲ್ಲಿ ಹೆಚ್ಚುಕಡಿಮೆ ಮಧ್ಯಾಹ್ನವಾಗಿತ್ತು. ಆದರೆ ಇಡೀ ಪ್ರದೇಶವು ಮಧ್ಯಾಹ್ನ ಮೂರು ಗಂಟೆಯ ತನಕ ಕತ್ತಲಾಯಿತು. ಸೂರ್ಯನ ಬೆಳಕೇ ಇರಲಿಲ್ಲ! ದೇವಾಲಯದ ಪರದೆಯು ಎರಡು ಭಾಗವಾಗಿ ಹರಿದುಹೋಯಿತು. ಆಮೇಲೆ ಯೇಸು, "ತಂದೆಯೇ, ನನ್ನ ಆತ್ಮವನ್ನು ನಿನಗೆ ಒಪ್ಪಿಸುತ್ತೇನೆ" ಎಂದು ಮಹಾಧ್ವನಿಯಿಂದ ಕೂಗಿ ಪ್ರಾಣಬಿಟ್ಟನು.

ಅಲ್ಲಿದ್ದ ಶತಾಧಿಪತಿ ನಡೆದದ್ದನ್ನು ನೋಡಿ, "ಈ ಮನುಷ್ಯನು ಒಳ್ಳೆಯವನೆಂದು ನನಗೆ ಗೊತ್ತಿತ್ತು" ಎಂದು ಹೇಳಿ ದೇವರನ್ನು ಸ್ತುತಿಸಿದನು. *ಲೂಕ 23:44-47*




ಆ ಸಂಜೆ ಯೋಸೇಫ ಎಂಬ ಶ್ರೀಮಂತ ವ್ಯಕ್ತಿ ಜೆರುಸಲೇಮಿಗೆ ಬಂದನು. ಅರಿಮತಾಯ ಪಟ್ಟಣದವನಾದ ಇವನು ಯೇಸುವಿನ ಶಿಷ್ಯನಾಗಿದ್ದನು. ಇವನು ಪಿಲಾತನ ಬಳಿಗೆ ಹೋಗಿ, ಯೇಸುವಿನ ದೇಹವನ್ನು ತನಗೆ ಕೊಡಬೇಕೆಂದು ಕೇಳಿದನು. ಯೇಸುವಿನ ದೇಹವನ್ನು ಯೋಸೇಫನಿಗೆ ಕೊಡುವಂತೆ ಪಿಲಾತನು ಸೈನಿಕರಿಗೆ ಅಪ್ಪಣೆ ಮಾಡಿದನು. ಯೋಸೇಫನು ಆತನ ದೇಹವನ್ನು ತೆಗೆದುಕೊಂಡು, ಅದನ್ನು ಹೊಸ ನಾರುಮಡಿಯ ಬಟ್ಟೆಯಿಂದ ಸುತ್ತಿ ಬಂಡೆಯಲ್ಲಿ ತಾನು ತೋಡಿಸಿದ್ದ ಹೊಸ ಸಮಾಧಿಯಲ್ಲಿ ಇಟ್ಟನು. ಸಮಾಧಿಯ ಬಾಗಿಲಿಗೆ ಒಂದು ದೊಡ್ಡ ಬಂಡೆಯನ್ನು ಉರುಳಿಸಿ ಹೊರಟುಹೋದನು. ಮಗ್ದಲದ ಮರಿಯಳು ಮತ್ತು ಇನ್ನೊಬ್ಬ ಮರಿಯಳು ಆ ಸಮಾಧಿಯ ಹತ್ತಿರ ಕುಳಿತುಕೊಂಡಿದ್ದರು.


*ಮತ್ತಾಯ 27:57-61*



ಭಾನುವಾರ ಮುಂಜಾನೆ ಇನ್ನೂ ಮೊಬ್ಬಿರುವಾಗ ಯೇಸುವಿನ ದೇಹವನ್ನಿಟ್ಟ ಸಮಾಧಿಯ ಬಳಿಗೆ ಆ ಸ್ತ್ರೀಯರು ತಾವು ಸಿದ್ಧಮಾಡಿದ ಪರಿಮಳದ್ರವ್ಯಗಳನ್ನು ತೆಗೆದುಕೊಂಡು ಬಂದರು. ಬಂಡೆ ಉರಳಿಸಲ್ಪಟ್ಟಿರುವುದನ್ನು ಕಂಡ ಅವರು ಒಳಗೆ ಹೋದರು. ಆದರೆ ಪ್ರಭು ಯೇಸುವಿನ ದೇಹವನ್ನು ಅವರು ಕಾಣಲಿಲ್ಲ. ಸ್ತ್ರೀಯರಿಗೆ ಇದು ಅರ್ಥವಾಗದೆ ಆಶ್ಚರ್ಯಪಡುತ್ತಿರಲು, ಹೊಳೆಯುವ ಉಡುಪುಗಳನ್ನು ಧರಿಸಿಕೊಂಡಿದ್ದ ಇಬ್ಬರು (ದೇವದೂತರು) ಅವರ ಬಳಿಯಲ್ಲಿ ನಿಂತರು. ಆ ಸ್ತ್ರೀಯರು ಬಹಳವಾಗಿ ಹೆದರಿ ತಮ್ಮ ಮುಖಗಳನ್ನು ನೆಲದ ಕಡೆಗೆ ಬಗ್ಗಿಸಿಕೊಂಡು ನಿಂತರು. ಆ ಮನುಷ್ಯರು, “ಬದುಕಿರುವ ವ್ಯಕ್ತಿಯನ್ನು ಇಲ್ಲಿ ಹುಡುಕುವುದೇಕೆ? ಇದು ಸತ್ತ ಜನರನ್ನು ಇಡುವ ಸ್ಥಳ! ಯೇಸು ಇಲ್ಲಿಲ್ಲ. ಆತನು ಜೀವಂತವಾಗಿ ಎದ್ದಿದ್ದಾನೆ! ಆತನು ಗಲಿಲಾಯದಲ್ಲಿದ್ದಾಗ ಹೇಳಿದ ವಿಷಯ ಜ್ಞಾಪಕವಿಲ್ಲವೋ? ಮನುಷ್ಯಕುಮಾರನು ಕೆಡುಕರ ವಶಕ್ಕೆ ಒಪ್ಪಿಸಲ್ಪಟ್ಟು; ಶಿಲುಬೆಯ ಮೇಲೆ ಕೊಲ್ಲಲ್ಪಟ್ಟು ಮೂರನೆಯ ದಿನದಲ್ಲಿ ಜೀವಂತವಾಗಿ ಎದ್ದುಬರುವನು ಎಂದು ಯೇಸು ತಿಳಿಸಲಿಲ್ಲವೇ!” ಎಂದು ಹೇಳಿದರು. ಆಗ ಆ ಸ್ತ್ರೀಯರು ಯೇಸುವಿನ ಮಾತುಗಳನ್ನು ಜ್ಞಾಪಿಸಿಕೊಂಡರು.

*ಲೂಕ 24:1-8*





ಆ ಕೂಡಲೇ ಅವರಿಬ್ಬರೂ ಎದ್ದು ಜೆರುಸಲೇಮಿಗೆ ಹಿಂತಿರುಗಿ ಹೋದರು. ಜೆರುಸಲೇಮಿನಲ್ಲಿ ಯೇಸುವಿನ ಶಿಷ್ಯರು ಒಟ್ಟಾಗಿ ಸೇರಿಬಂದಿದ್ದರು. ಹನ್ನೊಂದು ಮಂದಿ ಅಪೊಸ್ತಲರು ಮತ್ತು ಅವರ ಸಂಗಡ ಇದ್ದ ಆ ಜನರು, “ಪ್ರಭುವು (ಯೇಸು) ಸತ್ತವರೊಳಗಿಂದ ನಿಜವಾಗಿ ಎದ್ದಿದ್ದಾನೆ! ಆತನು ಸೀಮೋನನಿಗೆ (ಪೇತ್ರ) ಕಾಣಿಸಿಕೊಂಡನು” ಎಂದು ಹೇಳಿದರು.

ಆಗ ಆ ಇಬ್ಬರು ದಾರಿಯಲ್ಲಿ ನಡೆದ ಸಂಗತಿಗಳನ್ನು ತಿಳಿಸಿದರು. ಆತನು ರೊಟ್ಟಿ ಮುರಿದಾಗ ತಾವು ಆತನನ್ನು ಗುರುತಿಸಿದ್ದಾಗಿ ಅವರು ಹೇಳಿದರು.

ಅವರಿಬ್ಬರೂ ಈ ಸಂಗತಿಗಳನ್ನು ಹೇಳುತ್ತಿದ್ದಾಗ, ಯೇಸುವು ಶಿಷ್ಯರ ಗುಂಪಿನ ಮಧ್ಯದಲ್ಲಿ ನಿಂತುಕೊಂಡು ಅವರಿಗೆ, “ನಿಮಗೆ ಶಾಂತಿಯಾಗಲಿ” ಅಂದನು.

ಆಗ ಶಿಷ್ಯರು ಬೆರಗಾದರು. ಅವರಿಗೆ ಭಯವಾಯಿತು. ಅದು ಭೂತವೇ ಇರಬೇಕೆಂದು ಅವರು ಭಾವಿಸಿದರು. ಆದರೆ ಯೇಸು, “ನೀವು ಏಕೆ ಗಲಿಬಿಲಿಗೊಂಡಿದ್ದೀರಿ? ನೀವು ಕಣ್ಣಾರೆ ಕಂಡರೂ ಏಕೆ ಸಂಶಯಪಡುತ್ತೀರಿ? ನನ್ನ ಕೈಗಳನ್ನು ಮತ್ತು ಪಾದಗಳನ್ನು ನೋಡಿರಿ. ನಾನೇ ಅಲ್ಲವೇ! ನನ್ನನ್ನು ಮುಟ್ಟಿರಿ. ನನ್ನ ಈ ಜೀವಂತ ದೇಹವನ್ನು ನೀವೇ ನೋಡಿರಿ. ಭೂತಕ್ಕೆ ಈ ರೀತಿಯ ದೇಹವಿರುವುದಿಲ್ಲ” ಅಂದನು.

ಯೇಸು ಅವರಿಗೆ ಇದನ್ನು ಹೇಳಿದ ನಂತರ, ತನ್ನ ಕೈಗಳಲ್ಲಿ ಮತ್ತು ಪಾದಗಳಲ್ಲಿರುವ ಗಾಯದ ಗುರುತುಗಳನ್ನು ತೋರಿಸಿದನು.

*ಲೂಕ 24:33-40*



ಬಳಿಕ ಯೇಸು ಅವರಿಗೆ, “ಕ್ರಿಸ್ತನು ಕೊಲ್ಲಲ್ಪಟ್ಟು ಮೂರನೆಯ ದಿನದಲ್ಲಿ ಸತ್ತವರೊಳಗಿಂದ ಎದ್ದುಬರುವನು ಎಂದು ಬರೆಯಲ್ಪಟ್ಟಿದೆ. ಈ ಸಂಗತಿಗಳು ನೆರವೇರುವುದನ್ನು ನೀವು ನೋಡಿದಿರಿ. ನೀವೇ ಇದಕ್ಕೆ ಸಾಕ್ಷಿಗಳು. ನೀವು ಜನರ ಬಳಿಗೆ ಹೋಗಿ, ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಳ್ಳುವವರಿಗೆ ಪಾಪಕ್ಷಮೆಯಾಗುತ್ತದೆ ಎಂದು ತಿಳಿಸಿರಿ. ನೀವು ಈ ಸುವಾರ್ತೆಯನ್ನು ಜೆರುಸಲೇಮಿನಲ್ಲಿ ಪ್ರಾರಂಭಿಸಿ ಲೋಕದ ಜನರೆಲ್ಲರಿಗೂ ನನ್ನ ಹೆಸರಿನಲ್ಲಿ ತಿಳಿಸಬೇಕು” ಅಂದನು. *ಲೂಕ 24:46-48*

ಯೇಸು ತನ್ನ ಶಿಷ್ಯರನ್ನು ಜೆರುಸಲೇಮಿನ ಹೊರಗೆ ಬೆಥಾನಿಯದ ಸಮೀಪಕ್ಕೆ ಕರೆದುಕೊಂಡು ಹೋದನು. ಯೇಸು ತನ್ನ ಕೈಗಳನ್ನು ಎತ್ತಿ ಶಿಷ್ಯರನ್ನು ಆಶೀರ್ವದಿಸಿದನು. ಯೇಸು ಅವರನ್ನು ಆಶೀರ್ವದಿಸುತ್ತಿದ್ದಾಗ ಅವರಿಂದ ಬೇರ್ಪಟ್ಟು ಪರಲೋಕಕ್ಕೆ ಎತ್ತಲ್ಪಟ್ಟನು. *ಲೂಕ 24:50-51*

ಹೌದು, ದೇವರು ಲೋಕವನ್ನು ಎಷ್ಟೋ ಪ್ರೀತಿಸಿ ತನ್ನ ಒಬ್ಬನೇ ಮಗನನ್ನು ಕೊಟ್ಟನು; ಆತನನ್ನು ನಂಬುವ ಒಬ್ಬನಾದರೂ ನಾಶವಾಗದೆ ಎಲ್ಲರೂ ನಿತ್ಯಜೀವವನ್ನು ಹೊಂದಬೇಕೆಂದು ದೇವರು ತನ್ನ ಮಗನನ್ನು ಕೊಟ್ಟನು. ದೇವರು ತನ್ನ ಮಗನನ್ನು ಈ ಲೋಕಕ್ಕೆ ಕಳುಹಿಸಿದ್ದು, ಆತನ ಮೂಲಕವಾಗಿ ಈ ಲೋಕದ ಜನರನ್ನು ಅಪರಾಧಿಗಳೆಂದು ತೀರ್ಪು ಮಾಡುವುದಕ್ಕಾಗಿಯಲ್ಲ. ಈ ಲೋಕದವರು ರಕ್ಷಣೆ ಹೊಂದಿಕೊಳ್ಳಲೆಂದು ದೇವರು ಆತನನ್ನು ಕಳುಹಿಸಿಕೊಟ್ಟನು. ದೇವರ ಮಗನಲ್ಲಿ ನಂಬಿಕೆ ಇಡುವವನಿಗೆ ತೀರ್ಪಾಗುವುದಿಲ್ಲ. ಆದರೆ ನಂಬದವನಿಗೆ ಆಗಲೇ ತೀರ್ಪಾಗಿದೆ. ಏಕೆಂದರೆ ಅವನು ದೇವರ ಒಬ್ಬನೇ ಮಗನಲ್ಲಿ ನಂಬಿಕೆ ಇಡಲಿಲ್ಲ. *ಯೋಹಾನ 3:16-18*

ನಮ್ಮಲ್ಲಿ ಪಾಪವಿಲ್ಲವೆಂದು ಹೇಳಿಕೊಂಡರೆ, ನಮ್ಮನ್ನು ನಾವೇ ಮೋಸಪಡಿಸಿಕೊಳ್ಳುವವರಾಗಿದ್ದೇವೆ ಮತ್ತು ನಮ್ಮಲ್ಲಿ ಸತ್ಯವೇ ಇಲ್ಲ. ಆದರೆ ನಮ್ಮ ಪಾಪಗಳನ್ನು ಅರಿಕೆ ಮಾಡಿದರೆ, ಆತನು ನಂಬಿಗಸ್ತನೂ ನೀತಿವಂತನೂ ಆಗಿರುವುದರಿಂದ ನಮ್ಮ ಎಲ್ಲಾ ಪಾಪಗಳನ್ನು ಕ್ಷಮಿಸಿ ನಮ್ಮನ್ನು ಶುದ್ಧೀಕರಿಸುತ್ತಾನೆ. *1 ಯೋಹಾನ 1:8-9*

ಯೇಸು, “ನಾನೇ ಮಾರ್ಗವೂ ಸತ್ಯವೂ ಜೀವವೂ ಆಗಿದ್ದೇನೆ. ತಂದೆಯ ಬಳಿಗೆ ಹೋಗಲು ನಾನೇ ಏಕೈಕ ಮಾರ್ಗ” ಎಂದು ಹೇಳಿದನು. *ಯೋಹಾನ 14:6*

“ಕಷ್ಟಪಡುವವರೇ, ಹೊರೆಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ. ನಾನು ನಿಮಗೆ ವಿಶ್ರಾಂತಿಯನ್ನು ಕೊಡುತ್ತೇನೆ. ನನ್ನ ನೊಗಕ್ಕೆ ಹೆಗಲು ಕೊಟ್ಟು ನನ್ನಿಂದ ಕಲಿತುಕೊಳ್ಳಿರಿ. ನಾನು ಸಾತ್ವಿಕನೂ ದೀನನೂ ಆಗಿರುವುದರಿಂದ ನೀವು ನಿಮ್ಮ ಆತ್ಮಗಳಿಗೆ ವಿಶ್ರಾಂತಿಯನ್ನು ಕಂಡುಕೊಳ್ಳುವಿರಿ. ಹೌದು, ನಿಮಗೆ ನನ್ನ ನೊಗವು ಮೃದುವಾಗಿದೆ; ನನ್ನ ಹೊರೆಯು ಹಗುರವಾಗಿದೆ.” *ಮತ್ತಾಯ 11:28-30*

ಯೇಸು ಇನ್ನೂ ಅನೇಕ ಸೂಚಕಕಾರ್ಯಗಳನ್ನು ತನ್ನ ಶಿಷ್ಯರ ಕಣ್ಮುಂದೆ ಮಾಡಿದನು. ಆ ಅದ್ಭುತಕಾರ್ಯಗಳನ್ನು ಈ ಪುಸ್ತಕದಲ್ಲಿ ಬರೆದಿಲ್ಲ. ಆದರೆ ಆತನೇ ಕ್ರಿಸ್ತನೆಂದೂ ದೇವರ ಮಗನೆಂದೂ ನೀವು ನಂಬುವಂತೆಯೂ ನಂಬಿ ಆತನ ಹೆಸರಿನ ಮೂಲಕವಾಗಿ ಜೀವವನ್ನು ಪಡೆದುಕೊಳ್ಳುವಂತೆಯೂ ಇಷ್ಟೆಲ್ಲಾ ಬರೆದದೆ. *ಯೋಹಾನ 20:30-31*

“ನಾನೇ ಆದಿಯೂ ಅಂತ್ಯವೂ ಮೊದಲನೆಯವನೂ ಕಡೆಯವನೂ ಪ್ರಾರಂಭವೂ ಸಮಾಪ್ತಿಯೂ ಆಗಿದ್ದೇನೆ.” *ಪ್ರಕಟನೆ 22:13*

AΩ



ಈ ಪ್ರಾರ್ಥನೆ ನಿನ್ನ ಹೃದಯದ ಕೋರಿಕೆಯನ್ನು ವ್ಯಕ್ತಪಡಿಸುವುದೇ? ಹಾಗಿದ್ದಲ್ಲಿ, ಈ ಪ್ರಾರ್ಥನೆ ಮಾಡಿದರೆ ಯೇಸು ಕ್ರಿಸ್ತನು ತನ್ನ ವಾಗ್ದಾನದ ಪ್ರಕಾರ ನಿನ್ನ ಜೀವಿತದೊಳಗೆ ಬರುವನು:

"ಪ್ರಿಯ ಯೇಸು ಪ್ರಭುವೇ, ನಾನು ಪಾಪಿಯೆಂದು ಒಪ್ಪಿಕೊಳ್ಳುತ್ತೇನೆ ಮತ್ತು ನನ್ನ ಜೀವಿತಕ್ಕೆ ನಿನ್ನ ಅವಶ್ಯಕತೆ ಇದೆ. ನನ್ನ ಪಾಪಗಳ ನಿವಾರಣೆಗಾಗಿ ನೀನು ಶಿಲುಬೆಯ ಮರಣವನ್ನು ಹೊಂದಿದ್ದಕ್ಕಾಗಿ ನಿನಗೆ ವಂದನೆಗಳು. ನನ್ನ ಪಾಪಗಳನ್ನು ಕ್ಷಮಿಸಿ ನನಗೆ ನಿತ್ಯಜೀವವನ್ನು ನೀಡಿದ್ದಕ್ಕಾಗಿ ನಿನಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ನಿನ್ನನ್ನು ನನ್ನ ರಕ್ಷಕನನ್ನಾಗಿಯೂ ಕರ್ತನನ್ನಾಗಿಯೂ ನನ್ನ ಜೀವಿತದೊಳಗೆ ಆಹ್ವಾನಿಸುತ್ತಿದ್ದೇನೆ. ಕೃಪೆಮಾಡಿ ನನ್ನ ಜೀವಿತವನ್ನು ನಿನ್ನ ಸ್ವಾಧೀನಕ್ಕೆ ತೆಗೆದುಕೊ."

ಹೆಸರು: ______________________________ ದಿನಾಂಕ: ______________________________

Scripture portions taken from the

KANNADA HOLY BIBLE: EASY-TO-READ VERSION™

© 2010 by World Bible Translation Center, Inc. and used by permission.

ಲಿಂಡಾ ರಿಡೆಲ್ ರವರಿಂದ ಉದಾಹರಿಸಲ್ಪಟ್ಟ ಚಿತ್ರಗಳು

www.goodnews coloringbook.org

ಕನ್ನಡ Kannada